**ಸಾಕ್ಷಿಯನ್ನು ದಿಃ 24.09.2024 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ನಮೂದಿಸಿರುವ ಎಲ್ಲಾ ವಿಷಯಗಳು ಸರಿಯಾಗಿ ಮತ್ತು ಸತ್ಯವಾಗಿರುತ್ತವೆ. ಅದಕ್ಕೆ ನನ್ನ ಸಹಿ ಇರುತ್ತದೆ.

ಪ್ರಥಮ ವರ್ತಮಾನ ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 1 ಎಂದು, ದೂರಿನ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 2 ಎಂದು, ಸ್ಥಳ ಪಂಚನಾಮೆಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 3 ಎಂದು, ಕಚ್ಚಾ ನಕ್ಷೆಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 4 ಎಂದು, ಐಎಂವಿ ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 5 ಎಂದು, ಗಾಯದ ಪ್ರಮಾಣ ಪತ್ರದ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 6 ಎಂದು, ಶವ ತನಿಖಾ ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 7 ಎಂದು, ಪಿ.ಎಂ. ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 8 ಎಂದು, ಅಂತಿಮ ದೋಷಾರೋಪಣಾ ಪಟ್ಟಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 9 ಎಂದು, ಐದು ಡಿಸ್ಚಾರ್ಜ್ ಸಮ್ಮರಿಯನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ. 10 ಎಂದು, ವಂಶವೃಕ್ಷದ ನೋಟರಿಕೃತ ದಾಖಲೆ ಹಾಜರು ಪಡಿಸಿದ್ದು ಅದನ್ನು ನಿಪಿ. 11 ಎಂದು, ನರ್ಸಿಂಗ್ ದಾಖಲೆಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ. 12 ಎಂದು, 215 ಔಷಧಿ ಪಾವತಿ ರಸೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 13 ಎಂದು, 10 ನರ್ಸಿಂಗ್ ಬಿಲ್ ಅನ್ನು ಹಾಜರು ಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ. 14 ಎಂದು, 157 ಲ್ಯಾಬ್ ವರದಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ. 15 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶವನ್ನು ಕೋರಿದ್ದು, ನೀಡಲಾಯಿತು)

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು

ಮತ್ತು ಎಂ.ಎ.ಸಿ.ಟಿ., ಮೈಸೂರು.